**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.446/2025**

ಪಿ.ಡಬ್ಲ್ಯೂ: 1

ಸಿ.ಡಬ್ಲ್ಯೂ: 1

ಸಾಕ್ಷಿದಾರರ **ಹೆಸರು** : ಗಿರೀಶ್

ತಂದೆ **ಹೆಸರು** : ಮೂಡಲಗಿರಿಯಪ್ಪ

**ವಯಸ್ಸು** : **42 ವರ್ಷ**

**ಉದ್ಯೋಗ** : ವ್ಯವಸಾಯ

**ವಾಸಸ್ಥಳ** : ಅರವನಹಳ್ಳಿ ಗ್ರಾಮ

**ದಿನಾಂಕ: 27-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಆರೋಪಿತರು ನನ್ನ ಸಂಬಂಧಿಕರು. ಆರೋಪಿತರು ನನಗೆ ಹಲ್ಲೆ ಮಾಡಿರುವುದಿಲ್ಲ, ಪ್ರಾಣ ಬೆದರಿಕೆ ಹಾಕಿರುವುದಿಲ್ಲ. ಆರೋಪಿಗಳಿಂದ ನನಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ. ನಾನು ಈ ಪ್ರಕರಣದ ಸಂಬಂಧ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ. ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **24-11-2024** ರಂದು ಮಧ್ಯಾಹ್ನ **12-00** ಗಂಟೆ ಸಮಯದಲ್ಲಿ ಲಕ್ಕವಳ್ಳಿ ಯ ಅರುವನಹಳ್ಳಿ ಗ್ರಾಮದ ಸರ್ವೆ ನಂ.**3** ರ ನಮ್ಮ ಅಡಿಕೆ ತೋಟದಲ್ಲಿ ಆರೋಪಿತರು ಮಣ್ಣು ತೆಗೆಯುತ್ತಿದ್ದಾಗ ನಾನು ಏಕೆ ಮಣ್ಣು ತೆಗೆಯುತ್ತಿದ್ದಿರಾ ಎಂದು ಕೇಳಿದ್ದಕ್ಕೆ **2** ಮತ್ತು **3** ನೇ ಆರೋಪಿತರು ನನ್ನನ್ನು ಹಿಡಿದುಕೊಂಡಿದ್ದು, **1** ನೇ ಆರೋಪಿಯು ಅಲ್ಲೇ ಬಿದ್ದಿದ್ದ ಸಾಗುವನಿ ಮರದ ದೊಣ್ಣೆಯಿಂದ ತಲೆಗೆ ಮತ್ತು ಕೈ ಬೆರಳುಗಳಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವುಂಟು ಮಾಡಿರುತ್ತಾರೆಂದರೆ ಸರಿಯಲ್ಲ. ಆರೋಪಿತರೆಲ್ಲರೂ ಸೇರಿ ನನಗೆ ಜೀವ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ.

ಈ ಪ್ರಕರಣದ ಸಂಬಂಧ ನಾನು ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿದ್ದು, ಆದರೆ ಅದರಲ್ಲಿ ಬರೆದಿರುವ ವಿಚಾರ ಈಗ ನನಗೆ ನೆನಪಿಲ್ಲ.

ಈ ಪ್ರಕರಣದ ಸಂಬಂಧ ಪೊಲೀಸರು ಕೃತ್ಯ ನಡೆದ ಸ್ಥಳದಲ್ಲಿ ಮಹಜರ್ ಮಾಡಿದ್ದು, ಅದಕ್ಕೆ ನಾನು ಸಹಿ ಮಾಡಿದ್ದು, ಅದರಲ್ಲಿ ಬರೆದ ವಿಚಾರ ನನಗೆ ಈಗ ನೆನಪಿಲ್ಲ.

ಸಾಕ್ಷಿಯು ಎರಡೂವರೆ ಅಡಿ ಉದ್ದದ ಸಾಗುವನಿ ಮರದ ದೊಣ್ಣೆಯನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

ಆರೋಪಿತರು ನನ್ನ ಸಂಬಂಧಿಕರಾದ ಕಾರಣ ನಾನು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ನಾನು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡ ಕಾರಣ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇರುವುದಿಲ್ಲ

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**

ನಾನು ಈಗ ಓದಿ ಹೇಳಿದಂತೆ ದಿನಾಂಕಃ **03-06-2021** - - - - ರಂದು ಪುನಃ ನೋಡಿದರೆ ಗುರುತಿಸುತ್ತೇನೆಂದು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗೆಳೆದ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.